**ಪಿ ಡಬ್ಲೂ : 1**

ಸಾಕ್ಷಿಗೆ ದಿನಾಂಕಃ **04.12.2025** ರಂದು ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲುಃ 2ನೇ ಎದುರುದಾರರರ ಪರಃ ಶ್ರೀ ವಕೀಲರಿಂದ:</u>**

ನಾನು ಅಪಘಾತವನ್ನು ಪ್ರತ್ಯೇಕ್ಷವಾಗಿ ನೋಡಿಲ್ಲ ಎಂದರೆ ಸರಿ. ಅಪಘಾತದ ವಿಚಾರವನ್ನು ಅಕ್ಕ ಪಕ್ಕದ ಜನರು ನನಗೆ ಹೇಳಿರುತ್ತಾರೆ. ನನ್ನ ಮಗನಿಗೆ ಟ್ರಾಕ್ಟರ್ ಚಾಲನೆ ಮಾಡಲು ಬರುತ್ತಿತ್ತು ಎಂದರೆ ಸರಿಯಲ್ಲ. ನನ್ನ ಮಗನು ಟ್ರಾಕ್ಟರ್ ಚಾಲನೆ ಮಾಡುತ್ತಿದ್ದು,ಅವರಿಗೆ ಕಡಿಮೆ ವಯಸ್ಸು ಅಂದರೆ 15 ವರುಷ ಇದ್ದ ಕಾರಣ ಅವರು ಚಾಲನೆ ಮಾಡುತ್ತಿರಲಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎಂ.ವಿ.ಸಿ. ನಂ. 1344/2017 ಅರ್ಜಿಯನ್ನು 2ನೇ ಎದುರುದಾರರ ವಿರುದ್ದ ಸಲ್ಲಿಸಿ ಅದು ತೀರ್ಮಾನವಾಗಿದೆ ಎಂದರೆ ಸರಿ. ನನ್ನ ಮಗನು ಟ್ರಾಕ್ಟರ್ ನ್ನು ಚಾಲನೆ ಮಾಡಿಕೊಂಡು ಹೋಗಿ ಬಸ್ಸಿಗೆ ಡಿಕ್ಕಿಪಡಿಸಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಮಗನಿಗೆ ಡಿಎಲ್ ಇಲ್ಲದ ಕಾರಣ ಅದನ್ನು ಮರೆಮಾಚಿ ಸುಳ್ಳು ದೂರನ್ನು ಸಲ್ಲಿಸಿ, ಸುಳ್ಳು ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಪೋಲೀಸರು ಟ್ರಾಕ್ಟರ್ ಮಾಲೀಕನನ್ನು ಅರೋಪಿಯಾಗಿ ಮಾಡಿರುತ್ತಾರೆ ಎಂದರೆ ಇಬ್ಬರನ್ನು ಅರೋಪಿತರನ್ನಾಗಿ ಮಾಡಿರುತ್ತಾರೆ. ಬಸ್ಸು ನಿಧಾನವಾಗಿ ಬರುತ್ತಿದ್ದು, ನನ್ನ ಮಗನು ಟ್ರಾಕ್ಟರ್ ನ್ನು ಚಾಲನೆ ಮಾಡಿ ಅವನ ತಪ್ಪಿ ನಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ. ನನ್ನ ಮಗ ಮತ್ತು 1ನೇ ಎದುರುದಾರರ ನಡುವೆ ಕಾರ್ಮಿಕ ಮತ್ತು ಮಾಲೀಕನ ಸಂಬಂದವಿರಲಿಲ್ಲ ಎಂದರೆ ಸರಿಯಲ್ಲ. ನನ್ನ ಮಗನ ತಪ್ಪಿ ನಿಂದ ಅಪಘಾತ ಅಗಿರುವುದರಿಂದ 2ನೇ ಎದುರುದಾರರು ಪರಿಹಾರ ಕೊಡಲು ಬಾದ್ಯಸ್ದರಲ್ಲ ಎಂದರೆ ಸರಿಯಲ್ಲ.

4ನೇ ಎದುರುದಾರರು ಮಾಡಿದ ಪಾಟೀ ಸವಾಲನ್ನು ಅಳವಡಿಸಿಕೊಳ್ಳಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.

ಮರು ವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ ಮಳವಳ್ಳಿ